ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-560003

*******************************************************************************

ಸಂಖ್ಯೆ: ಸಿ.ಎಸ್1/ ಗ.ಶಾ/ಎಸ್.ಎಸ್.ಎಲ್.ಸಿ/ಆ.ಅಂ.ಅಪ್/01/2021-22 ದಿನಾಂಕ: 04-03-2022

**- ಸುತ್ತೋಲೆ -**

**ವಿಷಯ:** 2022ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ನೋಂದಣಿಯಾಗಿರುವ ಶಾಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡುವ ಬಗ್ಗೆ

**ಉಲ್ಲೇಖ:** ಮಂಡಳಿಯ ಅಧಿಸೂಚನೆ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಮಾರ್ಚ್-2022/39/2021-22 ದಿ: 07-12-2021

********

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ 2022ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳುವ ಶಾಲಾ ವಿದ್ಯಾರ್ಥಿಗಳ (CCERF) ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡಲು ದಿನಾಂಕ: **04-03-2022** ರಿಂದ **13-03-2022** ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ಎಲ್ಲಾ ಶಾಲೆಗಳ ಮುಖ್ಯಸ್ಥರು ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದು ಮಾಡಲು ಸೂಚಿಸಿದೆ.

1. ಮಂಡಳಿಯ ಜಾಲತಾಣ https://sslc.karnataka.gov.in/ ನ ಶಾಲಾ ಲಾಗಿನ್‌ನಲ್ಲಿ ತಂತ್ರಾಂಶ ಲಭ್ಯವಿದೆ.
2. ಈಗಾಗಲೇ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡಿರುವ ತಂತ್ರಾಂಶದ ಯೂಸರ್‌ನೇಮ್ ಹಾಗೂ ಪಾಸ್‌ವರ್ಡ್‌ನ್ನು ಬಳಸಿ ಆಂತರಿಕ ಅಂಕಗಳನ್ನು ಅಪ್‌ಡೇಟ್ ಮಾಡುವುದು.
3. ಲಾಗಿನ್ ಆದ ನಂತರ ಮೊದಲು Internal Marks Entry ಮೇಲೆ ಕ್ಲಿಕ್ ಮಾಡಬೇಕು. ತೆರೆಯಲಾಗುವ ವೆಬ್‌ಪೇಜ್‌ನಲ್ಲಿ ವಿದ್ಯಾರ್ಥಿಯ ಎಸ್.ಎ.ಟಿ.ಎಸ್ (SATS NUMBER) ಸಂಖ್ಯೆಯನ್ನು ನಮೂದಿಸಿ View ಬಟನ್ ಮೇಲೆ ಕ್ಲಿಕ್ಕಿಸುವುದು. ಆಗ ವಿದ್ಯಾರ್ಥಿಯ ಮಾಹಿತಿಗಳು Display ಆಗುತ್ತದೆ. ಈ ಎಲ್ಲಾ ಮಾಹಿತಿಗಳು ಆಂತರಿಕ ಅಂಕಗಳನ್ನು ನಮೂದು ಮಾಡುತ್ತಿರುವ ನಿರ್ದಿಷ್ಟ ವಿದ್ಯಾರ್ಥಿಯದೇ ಎಂದು ಖಚಿತಪಡಿಸಿಕೊಂಡು ಆಂತರಿಕ ಅಂಕಗಳನ್ನು ನಮೂದಿಸುವುದು.
4. ವಿದ್ಯಾರ್ಥಿಯು ತೆಗೆದುಕೊಂಡಿರುವ ಭಾಷೆ ಮತ್ತು ವಿಷಯಗಳು ಹಾಗೂ ತಂತ್ರಾಂಶದಲ್ಲಿ Display ಆಗಿರುವ ಭಾಷೆ ಮತ್ತು ವಿಷಯಗಳು ಸರಿಯಾಗಿವೆ ಎಂಬುದನ್ನು ಖಚಿತಪಡಿಸಿಕೊಂಡು, ಆಯಾ ಭಾಷೆ ಮತ್ತು ವಿಷಯಗಳಿಗೆ ಅನುಸಾರವಾಗಿ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡಬೇಕು.
5. ಪ್ರತಿ ವಿದ್ಯಾರ್ಥಿಯ ಆಂತರಿಕ ಅಂಕಗಳನ್ನು ನಮೂದಿಸಿ Save ಮಾಡಿದ ನಂತರ Print ಸೌಲಭ್ಯ ನೀಡಲಾಗಿದೆ. ವಿದ್ಯಾರ್ಥಿವಾರು ವರದಿಯ ಪ್ರಿಂಟ್ ಪಡೆಯುವುದು ಕಡ್ಡಾಯ. ಪ್ರಿಂಟ್ ಪಡೆಯದಿದ್ದಲ್ಲಿ Freeze

ಆಯ್ಕೆ ತೆರೆದುಕೊಳ್ಳುವುದಿಲ್ಲ.

6. Print Out ತೆಗೆದುಕೊಂಡು ನಮೂದಿಸಿರುವ ಅಂಕಗಳು ಸರಿಯಿದೆಯೇ ಎಂದು ಪರಿಶೀಲಿಸಬೇಕು. ಪ್ರತಿ ವಿದ್ಯಾರ್ಥಿಯ ಮಾಹಿತಿಯನ್ನು Print ತೆಗೆದು, ಪರಿಶೀಲಿಸಿದ ನಂತರ Clear ಬಟನ್ ಮೇಲೆ ಕ್ಲಿಕ್ಕಿಸುವುದು. ಪುನಃ ಅದೇ ವಿದ್ಯಾರ್ಥಿಯ ಎಸ್.ಎ.ಟಿ.ಎಸ್ (SATS NUMBER) ಸಂಖ್ಯೆಯನ್ನು ನಮೂದಿಸಿ **View** ಬಟನ್ ಮೇಲೆ ಕ್ಲಿಕ್ಕಿಸುವುದು. ಆಗ ತೆರೆದುಕೊಳ್ಳುವ Freeze ಬಟನ್ ಬಳಸಿ **Freeze** ಮಾಡಬೇಕು. **Freeze ಮಾಡಿದ ನಂತರ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.**
7. ಭಾಷಾ ವಿಷಯಗಳಿಗೆ ವಿನಾಯಿತಿಯನ್ನು ಪಡೆದಿರುವ ವಿಕಲಚೇತನ ವಿದ್ಯಾರ್ಥಿಗಳಿಗೆ, ವಿನಾಯಿತಿ ಪಡೆದ ವಿಷಯಗಳಿಗೆ ಆಂತರಿಕ ಅಂಕಗಳನ್ನು ನಮೂದಿಸುವ ಅಗತ್ಯವಿಲ್ಲ. ಈ ಆಯ್ಕೆಯನ್ನು ಸಹ ನೀಡಿರುವುದಿಲ್ಲ. ಕೆಲ ಪ್ರಕರಣಗಳಲ್ಲಿ ಪರ್ಯಾಯ ಕೋರ್ ವಿಷಯಗಳನ್ನು ಬರೆಯಲು ಅನುಮತಿ ನೀಡಲಾಗಿದ್ದು, ಈ ವಿಷಯಗಳಿಗೆ ಸಂಬಂಧಿಸಿದ ಆಂತರಿಕ ಅಂಕಗಳನ್ನೇ ನಮೂದಿಸಬೇಕಾಗಿದೆ.
8. ಆಯಾ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಿದ ನಂತರ ಶಾಲೆಯ ಕ್ರೋಢೀಕೃತ ವರದಿ (Consolidated Report) ಮುದ್ರಿಸಿಕೊಳ್ಳಬಹುದಾಗಿದೆ. ಕ್ರೋಢೀಕೃತ ವರದಿಯಲ್ಲಿ ಎಲ್ಲಾ ವಿದಾರ್ಥಿಗಳ Freeze status **'YES'** ಆಗಿದೆಯೇ ಎಂದು ಪರಿಶೀಲಿಸಿಕೊಳ್ಳುವುದು.
9. ಜೆ.ಟಿ.ಎಸ್ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನಮೂದಿಸುವ ಜೊತೆಯಲ್ಲೇ ಪ್ರಾಯೋಗಿಕ ಪರೀಕ್ಷೆಯ ಅಂಕಗಳನ್ನು ನಮೂದಿಸಲು ಅವಕಾಶ ನೀಡಲಾಗಿದ್ದು, ಸದರಿ ವಿದ್ಯಾರ್ಥಿಗಳ ಪ್ರಾಯೋಗಿಕ ಪರೀಕ್ಷೆಯು ಮುಕ್ತಾಯಗೊಂಡ ನಂತರ, ಈ ಶಾಲೆಗಳಿಗೆ ಆಂತರಿಕ ಅಂಕಗಳನ್ನು ನಮೂದಿಸಲು ಅವಕಾಶ ಕಲ್ಪಿಸಲಾಗುವುದು.

ಆಯಾ ಶಾಲೆಯ ಮುಖ್ಯಸ್ಥರು ದಿನಾಂಕ **13-03-2022**ರೊಳಗೆ ಎಲ್ಲಾ ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ನಮೂದಿಸಲು ಸೂಚಿಸಿದೆ. ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಶಾಲೆಗಳ ಆಂತರಿಕ ಅಂಕಗಳನ್ನು ನಮೂದಿಸುವ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಕ್ರಮವಹಿಸಲು ತಿಳಿಸಿದೆ.

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು, (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3. ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಶಾಲಾ ಲಾಗಿನ್ ಮುಖಾಂತರ